ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು –1**

**ಸಂಖ್ಯೆ : ಸಿ2(3)ಸಿಸಿಎ–20/2021 /459365** **ದಿನಾಂಕ : 23–12–2022**

**ಜ್ಞಾ ಪ ನ**

ವಿಷಯ :– ರಾಜ್ಯದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರುಗಳನ್ನು ನಿಯಮಬಾಹಿರವಾಗಿ ನಿಯೋಜನೆ ಮಾಡುತ್ತಿರುವ ಬಗ್ಗೆ.

ಉಲ್ಲೇಖ :– ಈ ಕಛೇರಿಯ ಜ್ಞಾಪನ ಸಂಖ್ಯೆ : ಸಿ2(3)ದೂರು–05/2019–20 ದಿನಾಂಕ : 01–10–2021.

*******

ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರುಗಳನ್ನು ನಿಯಮಬಾಹಿರವಾಗಿ ನಿಯೋಜನೆ ಮಾಡಿರುವುದನ್ನು ಕೂಡಲೆ ರದ್ದುಪಡಿಸಿ ಈ ಕಛೇರಿಗೆ ವರದಿಯನ್ನು ಸಲ್ಲಿಸುವಂತೆ ಉಲ್ಲೇಖಿತ ಈ ಕಛೇರಿಯ ಜ್ಞಾಪನದಲ್ಲಿ ನಿರ್ಧಿಷ್ಟವಾಗಿ ಸೂಚನೆಗಳನ್ನು ನೀಡಲಾಗಿದೆ.

ಈ ಕಛೇರಿಯ ಸೂಚನೆಗಳಿದ್ದಾಗಿಯೂ ಸಹ ಹಲವು ಜಿಲ್ಲೆಗಳಲ್ಲಿ ಶಿಕ್ಷಕರುಗಳ ನಿಯೋಜನೆಗಳನ್ನು ನಿಯಮಬಾಹಿರವಾಗಿ ಮಾಡುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ) ಇವರುಗಳಿಗೆ ನಿಯಮಬಾಹಿರವಾಗಿ ಮಾಡಿರುವ ಎಲ್ಲ ನಿಯೋಜನೆಗಳನ್ನು ಕೂಡಲೆ ರದ್ದುಪಡಿಸುವಂತೆ ಸೂಚಿಸಲಾಗಿದೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಕೂಡಲೇ ಈ ಕಛೇರಿಗೆ ವರದಿ ಸಲ್ಲಿಸಲು ಸೂಚಿಸಿದೆ. ಒಂದು ವೇಳೆ ಈ ಸೂಚನೆಯ ನಂತರವೂ ಸಹ ನಿಯಮಬಾಹಿರವಾಗಿ ನಿಯೋಜನೆಗಳು ಮುಂದುವರೆದಿದ್ದಲ್ಲಿ ಅಂತಹ ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ಇವರುಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಅಗತ್ಯ ಕ್ರಮವಹಿಸಲಾಗುವುದು ಎಂದು ತಿಳಿಸಲಾಗಿದೆ.

**(ಡಾ. ವಿಶಾಲ್ .ಆರ್., ಭಾ.ಆ.ಸೇ)**

**ಆಯುಕ್ತರು**

23/12/22

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳಿಗೆ ಮುಂದಿನ ತುರ್ತು ಕ್ರಮಕ್ಕಾಗಿ.

2. ರಾಜ್ಯದ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ( ಜಿಲ್ಲಾ ಉಪ ನಿರ್ದೇಶಕರುಗಳ ಮುಖಾಂತರ)

**ಪ್ರತಿಯನ್ನು** :–

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ.
2. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ನಿರ್ದೇಶಕರು, ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ಕಛೇರಿ ಪ್ರತಿ.